ರಾಜ್ಯದಲ್ಲಿರುವ ಅಂಗನವಾಡಿ ಕುರಿತು.

1625 - ಡಾ॥ಎಂ.ಪಿ. ಕರ್ಕಿ (ಕುಮಟಾ) : ಮಾನ್ಯ ಮಹಿಳಾ ಮತ್ತು ಮಕ್ಕಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97ನೇ ಸಾಲಿನಲ್ಲಿ ಹೆಚ್ಚುವರಿ ಮಂಜೂರಾತಿಯಾದ ಅಂಗನವಾಡಿಗಳೆಷ್ಟು?

ಆ) ಅಂಗನವಾಡಿಗಳನ್ನು ತಾಲ್ಲೂಕು ವಾರು ಹಂಚಿಕೆ ಮಾಡುವ ಕೆಲಸ ಎಂದು ಮುಗಿಯಿತು?

ಇ) ಸದರಿ ಅಂಗನವಾಡಿಗಳ ಪ್ರಾರಂಭ ಎಂದು ಮಾಡಲಾಗುವುದು?

ಶ್ರೀಮತಿ ವಿಮಲಾಬಾಯಿ ಜಗದೇವರಾವ್ ದೇಶ್‌ಮುಖ್ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು)

ಅ) ರಾಜ್ಯದಲ್ಲಿ 1996-97ನೇ ಸಾಲಿನಲ್ಲಿ ಹೆಚ್ಚುವರಿ ಅಂಗನವಾಡಿ ಕೇಂದ್ರಗಳು ಮಂಜೂರಾಗಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ತುರುವೇಕೆರೆ ತಾಲ್ಲೂಕಿಗೆ ಕೊಳಚೆ ನಿರ್ಮೂಲನ ಮಂಡಳಿಯಿಂದ ಮಂಜೂರಾಗಿರುವ ಯೋಜನೆ.

1627 - ಶ್ರೀ ಹೆಚ್.ಬಿ. ನಂಜೇಗೌಡ (ತುರುವೇಕೆರೆ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿಗೆ ಕೊಳಚೆ ನಿರ್ಮೂಲನ ಮಂಡಳಿಯಿಂದ ಮಂಜೂರಾಗಿರುವ ಯೋಜನೆಗಳು ಎಷ್ಟು? (ವಿವರ ನೀಡುವುದು).

ಶ್ರೀ ಹೆಚ್.ಡಿ. ರೇವಣ್ಣ (ವಸತಿ ಸಚಿವರು) :

ಅ) 1997-98ನೇ ಸಾಲಿನಲ್ಲಿ ತುರುವೇಕೆರೆಯ ಏ.ಕೆ.ಕಾಲೋನಿ ಕೊಳಚೆ ಪ್ರದೇಶಕ್ಕೆ ರಾಷ್ಟ್ರೀಯ ಕೊಳಚೆ ಪ್ರದೇಶಗಳ ಅಭಿವೃದ್ಧಿ ಯೋಜನೆಯ ಅಡಿಯಲ್ಲಿ 6.75 ಲಕ್ಷ ರೂ.ಗಳ ಅಂದಾಜಿನಲ್ಲಿ ಮಳೆ ನೀರಿನ ಚರಂಡಿ, ಸಮುದಾಯ ಭವನ ಹಾಗೂ ಕಿರು ನೀರು ಸರಬರಾಜು ಯೋಜನೆಗಳನ್ನು ತೆಗೆದುಕೊಳ್ಳಲು ಮಂಜೂರಾತಿ ನೀಡಲಾಗಿದೆ.

ಬೆಂಗಳೂರು ನಗರದಲ್ಲಿ ಬಾಡಿಗೆದಾರರಿಗೆ ಕಿರುಕುಳ

1630 - ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?